# ಎನ್‌ಐಟಿಕೆಗೆ ಕ್ವಿಜ್ ಪ್ರಶಸ್ತಿ

**ಮಹಾನಗರ, ಮಾ.23:** ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್ (ಟಿಸಿಎಸ್) ಮತ್ತು ಕರ್ನಾಟಕ ಸರಕಾರ ಪ್ರವರ್ತಿಸಿದ ಸ್ವಾಯತ್ತ ಸಂಸ್ಥೆಯಾದ ಐಟಿ ಶಿಕ್ಷಣ ಮಾನದಂಡಗಳ ಮಂಡಳಿ (ಬೈಟ್ಸ್) ಸಂಯುಕ್ತವಾಗಿ ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ 15ನೇ ಆವೃತ್ತಿಯ ಟಿಸಿಎಸ್ ಟೆಕ್ ಬೈಟ್ಸ್ ಕ್ವಿಜ್ ಸ್ಪರ್ಧೆಯ ಮಂಗಳೂರು ಪ್ರಾದೇಶಿಕ ಫೈನಲ್‌ನಲ್ಲಿ ಸುರತ್ಕಲ್ ಎನ್‌ಐಟಿಕೆಯ ಕೌಶಿಕ್ ಎಸ್.ನಂದನ್ ಪ್ರಶಸ್ತಿ ಪಡೆದಿದ್ದಾರೆ.

ಹಾಸನ ಸರಕಾರಿ ಎಂಜಿನಿಯರಿಂಗ್ ಕಾಲೇಜಿನ ಪುರುಷೋತ್ತಮ ಎಚ್.ಡಿ. ರನ್ನರ್ ಅಪ್ ಸ್ಥಾನ ಗೆದ್ದಿದ್ದಾರೆ. ವಿಜೇತರು ಕ್ರಮವಾಗಿ 12,000 ರೂ. ಮತ್ತು 10,000 ರೂ. ಮೌಲ್ಯದ ಬಹುಮಾನ ಪಡೆದಿದ್ದಾರೆ ಎಂದು ಟಿಸಿಎಸ್ ಬೆಂಗಳೂರು ಪ್ರಾದೇಶಿಕ ಮುಖ್ಯಸ್ಥ ಸುನೀಲ್ ದೇಶಪಾಂಡೆ ಮತ್ತು ಬೈಟ್ಸ್ ಅಧ್ಯಕ್ಷ ಎಸ್.ಸಡಗೋಪನ್ ಹೇಳಿದ್ದಾರೆ.




ಸಹ್ಯಾದ್ರಿ ಎಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್ ಕಾಲೇಜಿನ ಪ್ರಾಂಶುಪಾಲ ಡಾ।ಎಸ್.ಎಸ್. ಇಂಜಗನೇರಿ ಅವರು ವಿಜೇತರಿಗೆ ಬಹುಮಾನ ವಿತರಿಸಿದರು. ವಿಜೇತರು ಎ.5 ರಂದು ಬೆಂಗಳೂರಿನಲ್ಲಿ ನಡೆಯಲಿರುವ ರಾಜ್ಯ ಫೈನಲ್‌ನಲ್ಲಿ ಮಂಗಳೂರನ್ನು ಪ್ರತಿನಿಧಿಸಲಿದ್ದಾರೆ.

Udayavani, Date:24/03/24, p, no - 02_Sudina